ಓಎಸ್. 131/2021

ಡಿ. ಡಬ್ಲ್ಯೂನಂ. - 2

<u>ದಿನಾಂಕಃ 09.06.2026 ರಂದು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು</u>

**<u>ಮುಖ್ಯ ವಿಚಾರಣೆ : ಪ್ರತಿವಾದಿಯ ಪರ ವಕೀಲರಾದ ಶ್ರೀ. ವಿ.ಕೆ.ಎಂ ರವರಿಂದ –</u>**

ನಾನು ಪ್ರತಿವಾದಿ ಬ್ಯಾಂಕಿನ ವ್ಯವಸ್ಥಾಪಕನಾಗಿದ್ದು 5 ತಿಂಗಳ ಹಿಂದೆ ಸದರಿ ಬ್ಯಾಂಕಿನ ಪ್ರಭಾರವನ್ನು ವಹಿಸಿಕೊಂಡಿದ್ದೇನೆ. ನನ್ನ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ ಹಾಗೂ ಪ್ರಮಾಣ ಪತ್ರದಲ್ಲಿರುವ ಎಲ್ಲಾ ವಿಚಾರಗಳನ್ನು ನಾನು ನನ್ನ ವಕೀಲರಿಗೆ ತಿಳಿಸಿ ನನ್ನ ವಕೀಲರ ಮುಖಾಂತರ ಬರೆಸಿರುತ್ತೇನೆ ಹಾಗೂ ನನ್ನ ಸಹಿಯನ್ನು ಪ್ರಮಾಣ ಪತ್ರಕ್ಕೆ ಹಾಕಿರುತ್ತೇನೆ.

ಪ್ರತಿವಾದಿ ಬ್ಯಾಂಕಿನ ಪರವಾಗಿ ಸಾಕ್ಷಿ ನುಡಿಯಲು ನಾನು ಅಧಿಕಾರ ಪಡೆದಿರುತ್ತೇನೆ. ಅಧಿಕಾರ ಪತ್ರದ ನೋಟರಿ ಪ್ರತಿಯನ್ನು ಮೂಲ ದಾಖಲೆಯೊಂದಿಗೆ ಹೋಲಿಸಿ ತಾಳೆಯಾಗಿದ್ದರಿಂದ ಅದನ್ನು ನಿಡಿ–1 ಎಂದು ಗುರುತಿಸಲಾಯಿತು. ಮೂಲ ದಾಖಲೆಯನ್ನು ವಾಪಾಸ್ಸು ನೀಡಲಾಯಿತು. ಸ್ಟೇಟ್ ಮೆಂಟ್ ಆಫ್ ಅಕೌಂಟ್ಸ್ ಅನ್ನು ನಿಡಿ–2 ಎಂದು ಗುರುತಿಸಲಾಯಿತು.

**ವಾದಿ ಪರ ವಕೀಲರು ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದು, ಕಾಲಾವಕಾಶ ನೀಡಲಾಯಿತು.**

( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ರೀತ್ಯಾ ಗಣಕೀಕರಿಸಲಾಯ್ತು)

ಓದಿ ಹೇಳಿ ಕೇಳಿ ಸರಿ ಇದೆ

ಪ್ರಧಾನ ವ್ಯವಹಾರ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಸಾಗರ.